**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ : ಸಿ5(7):ಖಾ.ಪೂ.ಸೇ.ಘೋ.ಕು:2021-22 ದಿನಾಂಕ : 4.1.2022

-: ಸುತ್ತೋಲೆ :-

ವಿಷಯ : ರಾಜ್ಯದ ಎಲ್ಲಾ 'ಸಿ' ದರ್ಜೆಯ ನೌಕರರ ಕಾರ್ಯಕ್ಷಮತೆ ಹಾಗೂ ವಿಷಯ ಪರಿಣಿತಿಯ ಕುರಿತು ಲಿಖಿತ ಪರೀಕ್ಷೆಯ ಆಧಾರದ ಮೇಲೆ ಖಾಯಂ ಪೂರ್ವ ಸೇವಾವಧಿ ಘೋಷಿಸುವ ಕುರಿತು.

\- - -

ವಿಷಯಕ್ಕೆ ಸಂಬಂಧಿಸಿದಂತೆ, ಇಲಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ 'ಸಿ' ದರ್ಜೆ ನೌಕರನ ಖಾಯಂ ಪೂರ್ವ ಸೇವಾವಧಿಯನ್ನು ಘೋಷಣೆ ಮಾಡುವ ಮುನ್ನ ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಲೋಯರ್ / ಹೈಯರ್, ಜನರಲ್ ಲಾ - ಭಾಗ 1, ಕನ್ನಡ ಭಾಷಾ ಪರೀಕ್ಷೆಗೆ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗಳನ್ನು ಉತ್ತೀರ್ಣರಾಗಿರಬೇಕೆಂಬ ಮಾನದಂಡವನ್ನು ನಿಗದಿಪಡಿಸಲಾಗಿರುತ್ತದೆ. ಸದರಿ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿ, ಖಾಯಂ ಪೂರ್ವ ಸೇವಾವಧಿ ಘೋಷಣೆಯಾಗಿ ಇಲಾಖೆಯಲ್ಲಿ ಅನೇಕ ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದರೆ, ಅಂತಹ ನೌಕರರುಗಳ ಪೈಕಿ ಬಹುತೇಕ ನೌಕರರಿಗೆ ಇಲಾಖೆಯ ನಿಯಮಗಳ ಕುರಿತು ಪರಿಪೂರ್ಣ ಜ್ಞಾನವನ್ನು ಹೊಂದದೇ ಇರುವುದು ಈ ಕೆಳಕಂಡ ವಿಷಯಗಳಿಂದ ಗಮನಿಸಲಾಗಿದೆ :

1) ಕಡತಗಳಲ್ಲಿ ವಿಷಯಕ್ಕೆ ಸಂಬಂಧಿಸದಂತೆ ನಿಯಮಗಳನ್ನು ನಮೂದಿಸದೇ ಕಡತವನ್ನು ಮಂಡಿಸುತ್ತಿರುವುದು.
2) ಕಡತಗಳಲ್ಲಿನ ಟಿಪ್ಪಣಿ ಹಾಳೆಗಳಲ್ಲಿ ಬಹಳಷ್ಟು ಕಾಗುಣಿತ ದೋಷಗಳಿರುವುದು.
3) ಗಣಕಯಂತ್ರದ ಕನಿಷ್ಠ ಜ್ಞಾನವನ್ನು ಸಾಧಿಸದೇ ಇರುವುದು.

ಈ ಮೇಲ್ಕಂಡ ಕಾರಣಗಳಿಂದ ಇಲಾಖೆಯ ಕಾರ್ಯಕ್ಷಮತೆಯ ಮೇಲೆ ವ್ಯತಿರಿಕ್ತ ಪ್ರಭಾವ ಬೀರುತ್ತದೆ. ಪರಿಣಾಮವಾಗಿ, ಶಿಕ್ಷಕರುಗಳಿಗೆ ಸಿಗಬೇಕಾದ ಸೌಲಭ್ಯಗಳು ನಿಗದಿತ ಸಮಯದಲ್ಲಿ ಸಿಗದೇ, ಅವರುಗಳ ಬೋಧನಾ ಕಾರ್ಯವು ಕುಂಠಿತಗೊಳ್ಳುವ ಸಾಧ್ಯತೆ ಇದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅಡಚಣೆಯಾಗುವ ಸಂಭವವಿರುತ್ತದೆ. ಈ ಹಿನ್ನೆಲೆಯಲ್ಲಿ, ಸದರಿ ನೌಕರರುಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸಿ ನಿಗದಿತ ಸಮಯದೊಳಗೆ ಶಿಕ್ಷಕರಿಗೆ ಹಾಗೂ ಸಾರ್ವಜನಿಕರಿಗೆ ಸೌಲಭ್ಯಗಳನ್ನು ಒದಗಿಸುವ ಹಿನ್ನೆಲೆಯಲ್ಲಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ 'ಸಿ' ದರ್ಜೆಯ ನೌಕರರಿಗೆ ಕೆ.ಸಿ.ಎಸ್.ಆರ್. ಹಾಗೂ ಇಲಾಖೆಗೆ ಸಂಬಂಧಿತ ಇತರೆ ವಿಷಯಗಳ ಅರಿವು ಅತ್ಯಗತ್ಯವಾಗಿರುತ್ತದೆ.

ಆದುದರಿಂದ, ಇನ್ನು ಮುಂದೆ ರಾಜ್ಯದ ಎಲ್ಲಾ ಗ್ರೂಪ್ 'ಸಿ' ವೃಂದದ ನೌಕರರ ಖಾಯಂ ಪೂರ್ವ ಸೇವಾವಧಿ ಘೋಷಣೆ ಮಾಡುವ ಮುನ್ನ ಕಡ್ಡಾಯವಾಗಿ ವೃತ್ತಿ ಬುನಾದಿ ಹಾಗೂ ಇತರೆ ತರಬೇತಿಗಳಿಗೆ ನಿಯೋಜಿಸುವುದು ಹಾಗೂ ನಿಯಮಾನುಸಾರ ಎಲ್ಲಾ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾದ ನೌಕರರಿಗೆ, ಕಾರ್ಯಕ್ಷಮತೆ ಹಾಗೂ ವಿಷಯ ಪರಿಣಿತಿ ಕುರಿತು ವಿಭಾಗ ಮಟ್ಟದ ಜಂಟಿ ನಿರ್ದೇಶಕರು ಪ್ರತಿ ಮಾಹೆ 100 ಅಂಕಗಳಿಗೆ ಪರೀಕ್ಷೆಯನ್ನು ನಡೆಸಬೇಕು ಹಾಗೂ ಫಲಿತಾಂಶವನ್ನು ಖಾಯಂ ಪೂರ್ವ ಸೇವಾವಧಿ ಘೋಷಣೆ ಮಾಡುವ ಪ್ರಾಧಿಕಾರಕ್ಕೆ ಕಳುಹಿಸುವುದು.

ಆಡಳಿತಾತ್ಮಕ ಹಿತದೃಷ್ಟಿಯಿಂದ ಮೇಲಿನ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವುದು. ತಪ್ಪಿದ್ದಲ್ಲಿ, ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

R. 04/01/2022

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ :

1) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು
2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲ್ಬುರ್ಗಿ / ಧಾರವಾಡ ವಿಭಾಗ.
3) ಜಂಟಿ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಬೆಂಗಳೂರು.
4) ಸಾರ್ವಜನಿಕ ಶಿಕ್ಷಣ ಇಲಾಖೆಯ ನಿರ್ದೇಶಕರುಗಳಿಗೆ.
5) ಸಾರ್ವಜನಿಕ ಶಿಕ್ಷಣ ಇಲಾಖೆಯ ವಿಭಾಗೀಯ ಜಂಟಿ ನಿರ್ದೇಶಕರುಗಳಿಗೆ.
6) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಿ.ಟಿ.ಇ.ಯ ಪ್ರಾಂಶುಪಾಲರುಗಳಿಗೆ.
7) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ರವರುಗಳಿಗೆ ಅಗತ್ಯ ಕ್ರಮಕ್ಕಾಗಿ.